A-PDF Merger DEMO : Purchase from www.A-PDF.com to remove the watermark



ಅದರನ್ವಯ ಮೇಲೆ (3)ರಲ್ಲಿ ಓದಲಾದ ದಿನಾಂಕ:05-10-2013ರ ಸರ್ಕಾರದ ಆದೇಶದಲ್ಲಿ ಪರಿಶಿಷ್ಟ ಜಾತಿ ಉಪಯೋಜನೆಯಡಿ ರೂ.262.50 ಕೋಟಿಗಳು ಹಾಗೂ ಪರಿಶಿಷ್ಟ ಪಂಗಡಗಳ ಉಪಯೋಜನೆಯಡಿ ರೂ.112.50 ಕೋಟಿಗಳನ್ನು ಎರಡನೇ ಕಂತಿನ ಅನುದಾನವನ್ನು ಈಗಾಗಲೇ ಬಿಡುಗಡೆ ಮಾಡಿ ಸರ್ಕಾರವು ಆದೇಶ ಹೊರಡಿಸಿರುತ್ತದೆ.

ಮೇಲೆ (4)ರಲ್ಲಿ ಓದಲಾದ ದಿನಾಂಕ:17-10-2013ರ ಪ್ರಸ್ತಾವನೆಯಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಪರಿಶಿಷ್ಟ ಜಾತಿ ಉಪಯೋಜನೆ ಕ್ರೋಢೀಕೃತ ಅನುದಾನದಡಿ ರೂ.1050.00 ಕೋಟಿಗಳನ್ನು ನಿಗಧಿಪಡಿಸಿದ್ದು, ಈ ಪೈಕಿ ಈಗಾಗಲೇ ಎರಡನೇ ಕಂತಿನಲ್ಲಿ ಬಿಡುಗಡೆ ಮಾಡಿದ ಅನುದಾನವನ್ನು ಇಲಾಖೆ/ನಿಗಮಗಳಿಗೆ ಬಿಡುಗಡೆ ಮಾಡಲಾಗಿರುತ್ತದೆಂದು ತಿಳಿಸುತ್ತಾ, ಪ್ರಸ್ತುತ ಪರಿಶಿಷ್ಟ ಜಾತಿ ಉಪಯೋಜನೆಯಡಿ ಮೂರನೇ ತ್ರೈಮಾಸಿಕ ಕಂತಿನಲ್ಲಿ ರೂ.262.50 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಹಾಗೆಯೇ, ಮೇಲೆ (5)ರಲ್ಲಿ ಓದಲಾದ ದಿನಾಂಕ:24-10-2013ರ ಪ್ರಸ್ತಾವನೆಯಲ್ಲಿ ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಪರಿಶಿಷ್ಟ ಪಂಗಡಗಳ ಉಪಯೋಜನೆ ಕ್ರೋಢೀಕೃತ ಅನುದಾನದಡಿ ಮೂರನೇ ತ್ರೈಮಾಸಿಕ ಕಂತಿನಲ್ಲಿ ರೂ.112.50 ಕೋಟಿಗಳನ್ನು ಬಿಡುಗಡೆ ಮಾಡುವಂತೆ ಕೋರುತ್ತಾ, ಪರಿಶಿಷ್ಟ ಪಂಗಡಗಳ ಉಪಯೋಜನೆ ಕಾರ್ಯಕ್ರಮಗಳ ಪೈಕಿ ಕ್ರಮಸಂಖ್ಯೆ:18ರಲ್ಲಿದ್ದ "ಪರಿಶಿಷ್ಟ ಪಂಗಡಗಳ ಶ್ರೀ ಮಹರ್ಷಿ ವಾಲ್ಮೀಕಿ ಹಾಗೂ ಶ್ರೀ ಕೇತೇಶ್ವರ ಮೇದಾರ ಸಮುದಾಯಗಳ ಕ್ಷೇಮಾಭಿವೃದ್ಧಿ ಮತ್ತು ಗುರುಪೀಠಗಳಿಗೆ ಶೈಕ್ಷಣಿಕ ಮೂಲಭೂತ ಸೌಕರ್ಯಗಳನ್ನು ಒದಗಿಸಲು" ಎಂಬುದರ ಬದಲಿಗೆ ದಿನಾಂಕ:12-07-2013ರಂದು ಸನ್ಮಾನ್ಯ ಮುಖ್ಯಮಂತ್ರಿಗಳು ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ "ಪರಿಶಿಷ್ಟ ಪಂಗಡದ ಧಾರ್ಮಿಕ ಸಂಸ್ಥೆಗಳು ನಡೆಸುವ ವಿದ್ಯಾರ್ಥಿ ನಿಲಯಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಸಮುದಾಯ ಭವನಗಳ ನಿರ್ಮಾಣ ಇತ್ಯಾಧಿಗಳಿಗಾಗಿ" ಎಂದು ಬದಲಾವಣೆ ಮಾಡಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗಿದ್ದು, ಈ ಕೆಳಕಂಡಂತೆ ಆದೇಶ ಹೊರಡಿಸಲು ನಿರ್ಧರಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 62 ಎಸ್‌ಎಲ್‌ಪಿ 2013, ಬೆಂಗಳೂರು, ದಿನಾಂಕ:28-12-2013**

2013-14ನೇ ಸಾಲಿಗೆ (ರಾಜ್ಯವಲಯದಡಿ) ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆಗಳಡಿ ಒದಗಿಸಿರುವ ಕ್ರೋಢೀಕೃತ ಮೊತ್ತದಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರುಗಳಿಗೆ ಕ್ರಮವಾಗಿ ರೂ.262.50 ಕೋಟಿ (ರೂಪಾಯಿ ಎರಡು ನೂರಾ ಅರವತ್ತೆರಡು ಕೋಟಿ ಐವತ್ತು ಲಕ್ಷಗಳು

.........3)